ತಾಲ್ಲೂಕಿನಲ್ಲಿ 17 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಅಸ್ತಿತ್ವದಲ್ಲಿವೆ. ಆದ್ದರಿಂದ, ಹೊಸದಾಗಿ ಈಗಾಗಲೇ ಗಡಿ ಭಾಗದಲ್ಲಿ ಐಗಳಿ, ಮದಬಾವಿ, ಅಡಗಳ್ಳಿ, ತೊಲಸಂಗ, ಅನಂತಪುರ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕೆಲಸ ಮಾಡುತ್ತಿವೆ. ಆದ್ದರಿಂದ ಹೆಚ್ಚುವರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು ಅರ್ಹತೆ ಇರುವುದಿಲ್ಲ.

ಅ) ಇಲ್ಲಿಯವರೆಗೂ ಜಿಲ್ಲಾ ಪಂಚಾಯಿತಿಯಿಂದ ಪ್ರಸ್ತಾವನೆ ಬಂದಿರುವುದಿಲ್ಲ. ಪ್ರಸ್ತಾವನೆ ಬಂದನಂತರ ಮಾರ್ಗಸೂಚನೆಗಳ ಪ್ರಕಾರ ಕ್ರಮ ಕೈಗೊಳ್ಳಲಾಗುವುದು.

ಅಥಣಿ ತಾಲ್ಲೂಕಿನ ಅರಟಾಳ-ಬ್ಯಾಡಗಿ ಗ್ರಾಮಗಳಿಗೆ ಸರ್ಕಾರಿ ಪ್ರೌಢ ಶಾಲೆ ಮಂಜೂರಾತಿ

957 (1146) ಶ್ರೀ ಡೊಂಗರಗಾಂವ ಶಹಜಹಾನ್ ಇಸ್ಮಾಯಿಲ್ (ಅಥಣಿ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಅಥಣಿ ತಾಲ್ಲೂಕಿನ ಅರಟಾಳ-ಬ್ಯಾಡಗಿ ಗ್ರಾಮಗಳಿಗೆ ಸರ್ಕಾರಿ ಪ್ರೌಢ ಶಾಲೆ ಪ್ರಾರಂಭಿಸಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಗ್ರಾಮಗಳ ವಿದ್ಯಾರ್ಥಿಗಳು ಪ್ರೌಢ ಶಿಕ್ಷಣಕ್ಕೆ 10-12 ಕಿ.ಮೀ. ದೂರದ ಊರಿಗೆ ಹೋಗಬೇಕಾಗಿರುವುದು, ಹೆಣ್ಣು ಮಕ್ಕಳಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

ಇ) ಈ ಸಾಲಿನಲ್ಲಿ ಮಂಜೂರು ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು) :

ಅ) ಬಂದಿದೆ

ಆ) ಸರ್ಕಾರದ ಗಮನಕ್ಕೆ ಬಂದಿದೆ ಪರಿಶೀಲಿಸಲಾಗುತ್ತದೆ.

ಇ) ಪರಿಶೀಲಿಸಲಾಗುತ್ತಿದೆ.

ಬೈಂದೂರು ಪ್ರಥಮ ದರ್ಜೆ ಕಾಲೇಜನ್ನು ಯುನಿವರ್ಸಿಟಿಗೆ ಹಸ್ತಾಂತರಿಸುವುದು

960 (308) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೈಂದೂರು ಪ್ರಥಮ ದರ್ಜೆ ಕಾಲೇಜನ್ನು ಯೂನಿವರ್ಸಿಟಿಗೆ ಹಸ್ತಾಂತರಿಸುವ ವಿಚಾರ ಯಾವ ಹಂತದಲ್ಲಿದೆ;

ಆ) ಇದು ಸಿಂಡಿಕೇಟ್ ಕಮಿಟಿ ಮೀಟಿಂಗ್‌ನಲ್ಲಿ ಅನುಮೋದನೆಗೊಳ್ಳದೇ ಇರುವುದಕ್ಕೆ ಕಾರಣಗಳೇನು?

ಇ) ಯಾವಾಗ ಅನುಮೋದನೆ ನೀಡಲಾಗುವುದು;

ಈ) ಸಾಧ್ಯವಾಗದಿದ್ದಲ್ಲಿ, ಇರುವ ತೊಡಕುಗಳೇನು?

ಡಾ|| ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಈ ಬಗ್ಗೆ ಸರ್ಕಾರದಲ್ಲಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಆ) ಇ) ಮತ್ತು ಈ)

ಈ ವಿಷಯವು ವಿಶ್ವವಿದ್ಯಾಲಯದ ಸಿಂಡಿಕೇಟ್‌ನ ತೀರ್ಮಾನಕ್ಕೆ ಸಂಬಂಧಪಟ್ಟಿದೆ. ಆದ್ದರಿಂದ ಈ ಬಗ್ಗೆ ಸರ್ಕಾರದ ಅಭಿಪ್ರಾಯವೇನು ಇರುವುದಿಲ್ಲ.